## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 458 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಸಿ.ಎನ್ ಮಂಜೇಗೌಡ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 22.12.2022 |
| ಉತ್ತರಿಸುವ ಸಚಿವರು | : | ಮುಖ್ಯಮಂತ್ರಿ. |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ. | ಕಳೆದ 2 ವರ್ಷಗಳಲ್ಲಿ ಹೊಸದಾಗಿ ಎಷ್ಟು ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು) | ಕಳೆದ 2 ವರ್ಷಗಳಲ್ಲಿ ಹೊಸದಾಗಿ 1186 ನ್ಯಾಯಬೆಲೆ ಅಂಗಡಿಗಳನ್ನು ತೆರಯಲಾಗಿರುತ್ತದೆ. ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ-01**ರಲ್ಲಿ ಒದಗಿಸಲಾಗಿದೆ |
| ಆ. | ಸದರಿ ನ್ಯಾಯಬೆಲೆ ಅಂಗಡಿಗಳನ್ನು ಯಾವ ಮಾನದಂಡದಡಿ ಹಂಚಿಕೆ ಮಾಡಲಾಗಿದೆ; (ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ತಾಲ್ಲೂಕುವಾರು ಹೆಸರು ಸಹಿತ ಮಾಹಿತಿ ನೀಡುವುದು) | ಹೊಸ ನ್ಯಾಯಬೆಲೆ ಅಂಗಡಿ ಮಂಜೂರಾತಿಗೆ ಸಂಬಂಧಿಸಿದಂತೆ ಈ ಕೆಳಕಂಡ ಆದ್ಯತೆಯನ್ನು ನಿಗಧಿಪಡಿಸಲಾಗಿದ್ದು ಸದರಿ ಆದ್ಯತೆಯನ್ನು ಪರಿಗಣಿಸಿ ಅಗತ್ಯಕ್ಕೆ ತಕ್ಕಂತೆ ನ್ಯಾಯಬೆಲೆ ಅಂಗಡಿಯನ್ನು ಮಂಜೂರು ಮಾಡಲಾಗಿರುತ್ತದೆ.<br>ಎ) ಸರ್ಕಾರದ ನಿಗಮಗಳು/ಗ್ರಾಮ ಪಂಚಾಯಿತಿ/ ಸ್ಥಳೀಯ ನಗರ ಸಂಸ್ಥೆಗಳು<br>ಬಿ) ಸಹಕಾರ ಸಂಘಗಳು.<br>1. ಟಿಎಪಿಸಿಎಂಎಸ್/ಕೋ-ಆಪರೇಟಿವ್ ಮಾರ್ಕೆಂಟಿಂಗ್ ಸೊಸೈಟಿಗಳು.<br>2. ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು/ ವಿ.ಎಸ್.ಎಸ್.ಎನ್<br>3. ಹಾಫ್ ಕಾಮ್ಸ್<br>4. ಅಧಿಕೃತ ನೋಂದಣಿಯಾದ ಸಹಕಾರ ಸಂಘಗಳು<br>5. ಅಧಿಕೃತ ನೋಂದಣಿಯಾದ ಪ್ರಾಥಮಿಕ ಬಳಕೆದಾರರ ಸಹಕಾರ ಸಂಘಗಳು<br>6. ನೋಂದಣಿಯಾದ ಆದಿವಾಸಿ ವಿವಿದ್ದೋದ್ದೇಶ ಸಹಕಾರ ಸಂಘಗಳು.<br>7. ನೋಂದಣಿಯಾದ ನೇಕಾರರ ಸಹಕಾರ ಸಂಘಗಳು<br>8. ನೋಂದಣಿಯಾದ ಮಹಿಳಾ ವಿವಿದ್ದೋದ್ದೇಶ ಸಹಕಾರ ಸಂಘಗಳು<br>9. ನೋಂದಣಿಯಾದ ವಿವಿದ್ದೋದ್ದೇಶ ಸಹಕಾರ ಸಂಘಗಳು<br>10. ಅಂಗವಿಕಲ ಕಲ್ಯಾಣ ಸಹಕಾರ ಸಂಘಗಳು<br>11. ಸಹಕಾರ ಸಂಘಗಳು ನಡೆಸುವ ಬ್ಯಾಂಕ್ ಅಥವಾ ಕೋ- ಆಪರೇಟಿವ್ ಬ್ಯಾಂಕುಗಳು.<br>12. ನ್ಯಾಯಬೆಲೆ ಅಂಗಡಿ ಮಂಜೂರು ಮಾಡುವ ಗ್ರಾಮ ಅಥವಾ ಸ್ಥಳ |

| | | |
|---|---|---|
| | | (locality) ದಲ್ಲಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರದಿಂದ ಗುರುತಿಸಲ್ಪಟ್ಟ ಸ್ತ್ರೀ ಶಕ್ತಿ ಗುಂಪು ಮತ್ತು ಮಹಿಳಾ ಸ್ವ ಸಹಾಯ ಗುಂಪುಗಳು. ಅರ್ಜಿ ಸಲ್ಲಿಸುವ ದಿನಾಂಕಕ್ಕೆ 3 ವರ್ಷಗಳಿಗೆ ಕಡಿಮೆ ಅಲ್ಲದ ಅವಧಿಗೆ ಅಸ್ತಿತ್ವದಲ್ಲಿದ್ದು, ಸಂಪೂರ್ಣ ಒಂದು ವರ್ಷದ ಅವಧಿಗೆ 1 ಲಕ್ಷ ರೂ.ಗಳ ಕನಿಷ್ಠ ಬ್ಯಾಂಕ್ ಬ್ಯಾಲೆನ್ಸ್ ಹೊಂದಿದ್ದು ಆಯುಕ್ತರಿಂದ ಆಗಿಂದಾಗ್ಗೆ ನೀಡಲಾಗುವ ಎಲ್ಲಾ ಹೆಚ್ಚುವರಿ ಷರತ್ತುಗಳನ್ನು ಪೂರೈಸಿರಬೇಕು<br>13. ಖಾಸಗಿ-<br>ಎ) ವಿಕಲಚೇತನರ ವರ್ಗBench mark disability (ಪ್ರಾರಂಭಿಕವಾಗಿ 400 ನ್ಯಾಯಬೆಲೆ ಅಂಗಡಿಗಳು) ಮತ್ತು<br>ಬಿ) ಮಂಗಳಮುಖಿಯರ ವರ್ಗ (ಪ್ರಾರಂಭಿಕವಾಗಿ 30 ನ್ಯಾಯಬೆಲೆ ಅಂಗಡಿಗಳು)<br>ಸಿ) ಮೇಲ್ಕಂಡ ಸಹಕಾರ ಸಂಘಗಳ ಗುಣಮಟ್ಟವನ್ನು ಅವರಿಗೆ ನೀಡಲಾಗಿರುವ ಎ ಬಿ ಮತ್ತು ಸಿ ಶ್ರೇಣಿಯ ಆಡಿಟ್ ವರದಿಯನ್ನು ಪರಿಗಣಿಸಲಾಗುವುದು<br>ಡಿ) ಸದರಿ ಸಹಕಾರ ಸಂಘಗಳು 03 ವರ್ಷಗಳಿಗಿಂತ ಹಿಂದಿನವುಗಳಾಗಿರಬೇಕು ಹಾಗೂ ಕಳೆದ 2 ವರ್ಷಗಳಿಂದ ನಿರಂತರವಾಗಿ ರೂ.200000/-ದಷ್ಟು ಮೊತ್ತದ ಬ್ಯಾಂಕ್ ಬ್ಯಾಲೆನ್ಸ್ ಹೊಂದಿರಬೇಕು.<br>ಅಗತ್ಯ ವಸ್ತುಗಳ ಸಾರ್ವಜನಿಕ ವಿತರಣಾ ಪದ್ಧತಿ (ನಿಯಂತ್ರಣ) ಆದೇಶ 2016ರ ಕಲಂ 5 ರಂತೆ ನ್ಯಾಯಬೆಲೆ ಅಂಗಡಿ ನಡೆಸಲು ಎರಡು ಮಾಹೆಗಳ ಪಡಿತರ ಪದಾರ್ಥಗಳನ್ನು ಶೇಖರಿಸುವಷ್ಟು ಸ್ಥಳಾವಕಾಶ ಉಳ್ಳ ಸೂಕ್ತವಾದ ವ್ಯಾಪಾರ ಸ್ಥಳವನ್ನು ಹೊಂದಿರಬೇಕು ಮತ್ತು ಎರಡು ಮಾಹೆಗಳ ಪಡಿತರ ದಾಸ್ತಾನನ್ನು ಖರೀದಿಸಲು ಸಾಕಷ್ಟು ಮೊತ್ತವನ್ನು ಬ್ಯಾಂಕ್ ಖಾತೆಯಲ್ಲಿ ಹೊಂದಿರಬೇಕು ಎಂಬ ಷರತ್ತನ್ನು ಸಹ ವಿಧಿಸಲಾಗಿದೆ.<br>ಕಳೆದ ಎರಡು ವರ್ಷಗಳಲ್ಲಿ ಚಾಮರಾಜನಗರ ಜಿಲ್ಲೆಯಲ್ಲಿ 12 ಹಾಗೂ ಮೈಸೂರು ಜಿಲ್ಲೆಯಲ್ಲಿ 04 ಹೊಸ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡಲಾಗಿರುತ್ತದೆ.<br>ಹೊಸದಾಗಿ ಮಂಜೂರು ಮಾಡಲಾಗಿರುವ ನ್ಯಾಯಬೆಲೆ ಅಂಗಡಿಗಳ ವಿವರವನ್ನು **ಅನುಬಂಧ-02** ರಲ್ಲಿಒದಗಿಸಲಾಗಿದೆ. |
| ಇ. | ಜಿಲ್ಲೆಯ ಮತ್ತು ತಾಲ್ಲೂಕು ಕೇಂದ್ರದಿಂದ ಪಡಿತರ ವಿತರಣಾ ಕೇಂದ್ರಗಳಿಗೆ ಪಡಿತರವನ್ನು ಯಾವ ಪದ್ಧತಿಯಲ್ಲಿ ಸಾಗಾಣಿಕೆ ಮಾಡಲಾಗುತ್ತಿದೆ; | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ ನೇಮಿಸಲ್ಪಟ್ಟ ಸಗಟು ಗುತ್ತಿಗೆದಾರರು ಜಿಲ್ಲೆಯಲ್ಲಿನ ಭಾರತ ಆಹಾರ ನಿಗಮದ ಗೋದಾಮುಗಳಿಂದ ಆಹಾರಧಾನ್ಯವನ್ನು ಎತ್ತುವಳಿ ಮಾಡಿ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಗೋದಾಮುಗಳಿಗೆ ಸಾಗಾಣಿಕೆ ಮಾಡುತ್ತಾರೆ. ಜಿಲ್ಲೆ ಸಾಗಾಣಿಕೆ ಗುತ್ತಿಗೆದಾರರು |

| | | |
|---|---|---|
| | (ವಿವರ ನೀಡುವುದು) | ಸದರಿ ಗೋದಾಮುಗಳಿಂದ ಆಹಾರಧಾನ್ಯವನ್ನು ಎತ್ತುವಳಿ ಮಾಡಿ ಆಹಾರಧಾನ್ಯವನ್ನು ನ್ಯಾಯಬೆಲೆ ಅಂಗಡಿಗಳಿಗೆ ಸಾಗಾಣಿಕೆ ಕಾರ್ಯವನ್ನು ಮಾಡುತ್ತಾರೆ. |
| ಈ. | ಸರಬರಾಜು ಸಾಗಾಣಿಕೆ ಮಾಡುವುದನ್ನು ಯಾವ ಮಾನದಂಡ ಅನುಸರಿಸಿನೀಡಲಾಗುತ್ತಿದೆ; ಹಾಗೂ ಸಾಗಾಣಿಕೆದಾರರಿಗೆ ನೀಡುತ್ತಿರುವ ಮೊತ್ತ ಎಷ್ಟು; (ವಿವರನೀಡುವುದು) | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಗೆ ಅಗತ್ಯವಿರುವ ಆಹಾರಧಾನ್ಯವನನ್ನು ಸಾಗಾಣಿಕೆ ಮಾಡಲು ಪ್ರತಿ ತಾಲ್ಲೂಕಿಗೆ ಸಗಟು ಮತ್ತು ಚಿಲ್ಲರೆ ಗುತ್ತಿಗೆದಾರರನ್ನು ಜಿಲ್ಲೆಗಳ ಹಂತದಲ್ಲಿ ಟೆಂಡರ್ ಕರೆಯುವ ಮೂಲಕ ಆಯ್ಕೆ ಮಾಡಲಾಗುತ್ತದೆ. ಸಗಟು ಸಾಗಾಣಿಕೆ ಗುತ್ತಿಗೆಗೆ ಸಂಬಂಧಿಸಿದಂತೆ ಪ್ರತಿ ಕ್ವಿಂಟಾಲ್ ಆಹಾರ ಧಾನ್ಯವನ್ನು 0 ರಿಂದ 08 ಕಿ.ಮೀ ವರೆಗೆ ಸಾಗಾಣಿಕೆ ಮಾಡಲು ರೂ.29.07 ಗಳನ್ನು ಬೆಂಚ್ ಮಾರ್ಕ್ ದರವನ್ನು ನಿಗದಿಪಡಿಸಲಾಗಿದೆ. ಹಾಗೂ ಚಿಲ್ಲರೆ ಸಾಗಾಣಿಕೆ ಗುತ್ತಿಗೆಗೆ ಸಂಬಂಧಿಸಿದಂತೆ ಪ್ರತಿ ಕ್ವಿಂಟಾಲ್ ಆಹಾರ ಧಾನ್ಯವನ್ನು 0 ರಿಂದ 08 ಕಿ.ಮೀ ವರೆಗೆ ಸಾಗಾಣಿಕೆ ಮಾಡಲು ರೂ.38.07 ಗಳನ್ನು ಬೆಂಚ್ ಮಾರ್ಕ್ ದರವನ್ನಾಗಿ ನಿಗದಿಪಡಿಸಲಾಗಿದೆ. ತದನಂತರ ಪ್ರತಿ ಕಿ.ಮೀ ಹೆಚ್ಚುವರಿ ಸಾಗಾಣಿಕೆಗೆ ಪ್ರತಿ ಕ್ವಿಂಟಾಲ್ 0.7 ದರವನ್ನು ನಿಗದಿಪಡಿಸಲಾಗಿದೆ. |
| ಉ. | ಪಡಿತರ ವಿತರಣೆ ಮಾಡುವ ಸಾಗಾಣಿಕೆ ವಾಹನಗಳಿಗೆ ಜಿ.ಪಿ.ಎಸ್ ಅಳವಡಿಸದಿರಲು ಕಾರಣವೇನು; ಹಾಗೂ ಪಡಿತರ ಸರಬರಾಜು ಮಾಡುವುದಕ್ಕೆ ಹೊಸದಾಗಿ ಟೆಂಡರ್ ಕರೆದು ಕ್ರಮವಹಿಸಿಕೊಡಲಾಗುತ್ತಿದೆಯೇ? (ವಿವರ ನೀಡುವುದು) | 2022-24 ನೇ ಸಾಲಿಗೆ ಆಹಾರ ಧಾನ್ಯಗಳ ಸಾಗಾಣಿಕೆಗೆ ಸಂಬಂಧಿಸಿದಂತೆ ಸಗಟು ಹಾಗೂ ಚಿಲ್ಲರೆ ಗುತ್ತಿಗೆದಾರರನ್ನು ಟೆಂಡರ್‌ನ್ನು ಕರೆಯಲಾಗಿದ್ದು, ಬಹುತೇಕ ಜಿಲ್ಲೆಗಳಲ್ಲಿ ಸಾಗಾಣಿಕೆ ಗುತ್ತಿಗೆ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಹೊಸ ಗುತ್ತಿಗೆದಾರರನ್ನು ನೇಮಿಸಲಾಗಿದೆ. ಸದರಿ ಟೆಂಡರ್ ಷರತ್ತಿನಲ್ಲಿ ಆಹಾರಧಾನ್ಯ ಸಾಗಾಣಿಕೆ ಮಾಡುವ ವಾಹನಗಳಿಗೆ ಜಿ.ಪಿ.ಎಸ್ ಅಳವಡಿಸುವುದು ಕಡ್ಡಾಯ ಮಾಡಲಾಗಿದೆ. |

**ಆನಾಸ 87 ಆನಾಸ 2022 (ಇ-ಆಫೀಸ್)**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ